299 Siddartha Law College, Darga Road, Gulbarga - 585 105

**1639 (2310) ಶ್ರೀ ಸಿದ್ದು ಸವದಿ (ಜಮಖಂಡಿ)** – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುವರ್ಣ ಗ್ರಾಮೋದಯ ಯೋಜನೆಯ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು,

ಆ) ಪ್ರತಿ ಹಳ್ಳಿಗೆ ಎಷ್ಟು ಅನುದಾನ ನೀಡಲಾಗಿದೆ ಹಾಗೂ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು,

ಇ) ಈ ಎಲ್ಲಾ ಕೆಲಸಗಳನ್ನು ಯಾವ ರೀತಿ ಮತ್ತು ಯಾವ ಇಲಾಖೆಯ ಮೂಲಕ ಅನುಷ್ಠಾನಗೊಳಿಸುವ ಯೋಜನೆ ರೂಪಿಸಲಾಗಿದೆ?

**ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)**:

ಅ) ದಿನಾಂಕ 25–02–07 ರಂದು ಪ್ರಾರಂಭಿಸಲಾಗಿದೆ

ಆ) ಪ್ರತಿ ಗ್ರಾಮಕ್ಕೆ ಸರಾಸರಿ ರೂ 15 00 ಲಕ್ಷಗಳಂತೆ ಒಟ್ಟು ಎಲ್ಲಾ ಜಿಲ್ಲೆಗಳಿಗೆ ರೂ 164 70 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ (ಬೀದರ್ ಜಿಲ್ಲೆ ಹೊರತುಪಡಿಸಿ)

ರಸ್ತೆ, ಚರಂಡಿ, ಶಾಲಾ ಕಟ್ಟಡಗಳು, ಅಂಗನವಾಡಿ ಕಟ್ಟಡಗಳು, ನೀರು ವಸತಿ ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು

ಇ) 1) ಆಯ್ಕೆಯಾದ ಗ್ರಾಮಗಳ ಗ್ರಾಮಾಭಿವೃದ್ಧಿ ಯೋಜನೆಯನ್ನು ಸರ್ಕಾರೇತರ ಸಂಸ್ಥೆಗಳ ಮುಖಾಂತರ ತಯಾರಿಸಿ ಸರ್ಕಾರದ ಅನುಮೋದನೆ ಪಡೆದು ನಂತರ ಅನುಷ್ಠಾನಗೊಳಿಸಲಾಗುವುದು

2) ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳ ಮೂಲಕ ಆಯಾ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುವುದು